(ಸಾಕ್ಷಿಯನ್ನು ದಿನಾಂಕಃ 11.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು. )

**ಪಾಟೀ ಸವಾಲುಃ ವಾದಿ ಪರ ವಕೀಲರುಃ ಶ್ರೀ ರವರಿಂದ**

ನಾನು 7 ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿರುವುದಿಲ್ಲ. ಕೆಸ್ತೂರು ಮತ್ತು ನಮ್ಮ ಊರಿನ ನಡುವೆ 500 ಮೀಟರ್ ನ ಅಂತರವಿರುತ್ತದೆ. ದಾವಾ ಸ್ವತ್ತು ನಾವು ತಿರುಗಾಡುವ ದಾರಿಯಲ್ಲಿಯೇ ಇರುತ್ತದೆ. ದೊಡ್ಡತಿಮ್ಮೇಗೌಡನಿಗೆ ಒಟ್ಟು 5 ಜನ ಮಕ್ಕಳಿರುತ್ತಾರೆ. ಅದರಲ್ಲಿ 3 ಜನ ಗಂಡು, ಮಕ್ಕಳು ಇಬ್ಬರು ಹೆಣ್ಣುಮಕ್ಕಳು. ದೊಡ್ಡತಿಮ್ಮೇಗೌಡರಿಗೆ 5 ಜನ ಮಕ್ಕಳು ಎಂದು ಸುಳ್ಳು ಹೇಳುತ್ತಿದ್ದೇನೆಂದರರೆ ಸರಿಯಲ್ಲ. ದೊಡ್ಡತಿಮ್ಮೇಗೌಡರಿಗೆ 5 ಜನ ಗಂಡು ಹಾಗೂ 3 ಜನ ಹೆಣ್ಣು ಮಕ್ಕಳಿರುತ್ತಾರೆಂದರೆ ಸರಿ. 1 ನೇ ಪ್ರತಿವಾದಿ ಕುಟುಂಬದವರ ಬಗ್ಗೆ ನನಗೆ ಯಾವುದೇ ವಿಚಾರ ಗೊತ್ತಿಲ್ಲದೇ ಇದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಪ್ರತಿವಾದಿ 1 ಮತ್ತು ಅವರ ಹೆಂಡತಿ ನಿವೇಶವನ್ನು ಕರ್ತರಾಮ್ ಚೌದರಿ ಮತ್ತು ಗುಲ್ಷನ್ ಬಾನು ರವರಿಗೆ ನಿವೇಶವನ್ನು ಮಾರಾಟ ಮಾಡಿದ್ದರು ಎಂದರೆ ಸರಿಯಲ್ಲ. ಆದರೆ ನನಗೆ ನಿಖರವಾದ ದಿನಾಂಕ ಗೊತ್ತಿಲ್ಲ. ಪ್ರತಿವಾದಿ 1 ರವರು 35 ವರ್ಷಗಳ ಹಿಂದೆ 2 ವರೆ ಗುಂಟೆ ಜಮೀನನ್ನು ಖರೀದಿ ಮಾಡಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ದೊಡ್ಡತಿಮ್ಮೇಗೌಡ ಅಪ್ಪಾಜಿಗೌಡ ಎಂಬುವವರಿಗೆ ಮಾರಾಟ ಮಾಡಿದ್ದರು ಎಂದರೆ ಸಾಕ್ಷಿಯು ನನಗೆ ಅದರ ಬಗ್ಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. 1 ನೇ ವಾದಿಯು ಕೋಳಿ ಅಂಗಡಿಯನ್ನು ನಡೆಸುತ್ತಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ಅವರ ಪಿತ್ರಾರ್ಜಿತ ಆಸ್ತಿಯಲ್ಲಿ ಜೀವನ ನಡೆಸುತ್ತಿದ್ದರು ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಗೆ ಯಾವುದೇ ಆದಾಯದ ಮೂಲ ಇರಲಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯು 5 ಗುಂಟೆ ಜಮೀನನ್ನು ಎಷ್ಟು ಮೊತ್ತಕ್ಕೆ ಖರೀದಿ ಮಾಡಿದ್ದರು ಎಂದು ನನಗೆ ಗೊತ್ತಿಲ್ಲ. ಸದರೀ ಖರೀದಿಯ ಬಗ್ಗೆ ನನಗೆ ಯಾವುದೇ ವಿಚಾರ ಗೊತ್ತಿಲ್ಲದೇ ಇದ್ದರೂ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ವಾದಿಗೆ ಮೇಲೆ ಹೇಳಿದ ಕ್ರಯಪತ್ರದ ಬಗ್ಗೆ ಗೊತ್ತಿತ್ತು ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ವಾದಿಯು ಅವರ ತಂದೆಯನ್ನು ಹಿಸ್ಸೆ ಕೇಳಿದಾಗ ಅವರು ತಿರಸ್ಕರಿಸಿದ್ದು, ದಾವೆಯನ್ನು ದಾಖಲು ಮಾಡುವ ಸಲುವಾಗಿ ಕಂದಾಯ ದಾಖಲೆಗಳನ್ನು ತೆಗೆದುಕೊಂಡಾಗ ಮೇಲಿನ

ಕ್ರಯಪತ್ರಗಳ ಬಗ್ಗೆ ಅವರಿಗೆ ಗೊತ್ತಾಗಿರುತ್ತದೆಯೆಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ಅವರ ಮಗಳ ಮದುವೆಗಾಗಿ ಸ್ವತ್ತುಗಳನ್ನು ಮಾರಾಟ ಮಾಡಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ವಾದಿಯ ಮದುವೆ ಕೆಸ್ತೂರಿನ ಲಕ್ಷ್ಮೀ ದೇವಸ್ಥಾನದಲ್ಲಿ ಆಗಿದೆಯೆಂದರೆ ಸರಿಯಲ್ಲ. ನಾನು ಪ್ರತಿವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿಯನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಪ್ರತಿವಾದಿಯೇ ಬರೆಸಿ ಹಾಕಿರುತ್ತಾರೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಪತ್ರದಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಈ ಪ್ರಕರಣದ ಬಗ್ಗೆ ಯಾವುದೇ ಅಂತ ನನಗೆ ಗೊತ್ತಿಲ್ಲದೇ ಇದ್ದರೂ ಸಹ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ಮದ್ಯಪಾನದ ವ್ಯಸನದಿಂದ ಮರಣ ಹೊಂದಿರುತ್ತಾರೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸ ಇ ಓ.

1 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ ಮದ್ದೂರು.